ಹೊಸದಾಗಿ ಕೆರೆಗಳ ಅಭಿವೃದ್ಧಿ

361(652); ಶ್ರೀ ಭೀಮಾ ನಾಯ್ಕ ಎಸ್.

ಅ) ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕೆಂಚಟನಹಳ್ಳಿ ವರದಾಪುರ ಗ್ರಾಮದ ಸರ್ವೆ ನಂ. 245ರಲ್ಲಿ ಕೆರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೆರೆಯ ಒಟ್ಟು ವಿಸ್ತೀರ್ಣ ಎಷ್ಟು; ಈ ಕೆರೆಯಿಂದ ಎಷ್ಟು ಹೆಕ್ಟೇರ್ ಪ್ರದೇಶಕ್ಕೆ ನೀರನ್ನು ಒದಗಿಸುವ ಸಾಮರ್ಥ್ಯ ಹೊಂದಿದೆ ಹಾಗೂ ಈ ಕೆರೆ ಯಾವ ಇಲಾಖೆಯ ವ್ಯಾಪ್ತಿಗೊಳಪಟ್ಟಿದೆ;(ವಿವರಗಳನ್ನು ನೀಡುವುದು);

ಇ) ಹಾಗಿದ್ದಲ್ಲಿ, ಇದುವರೆವಿಗೂ ಈ ಕೆರೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು.)

ಅ) ಹೌದು.

ಆ) ಕೆರೆಯ ಒಟ್ಟು ವಿಸ್ತೀರ್ಣ 103.67 ಎಕರೆ. ಕೆರೆಯಲ್ಲಿ ನೀರು ಸಂಗ್ರಹವಾದಲ್ಲಿ ಅಂದಾಜು 100 ರಿಂದ 150 ಎಕರೆ ಪ್ರದೇಶಕ್ಕೆ ನೀರನ್ನು ಒದಗಿಸುವ ಸಾಮರ್ಥ್ಯ ಹೊಂದಿರುತ್ತದೆ. ಸದರಿ ಕೆರೆ ಹಾಲಿ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿರುತ್ತದೆ.

ಇ) ಈ ಕೆರೆಯು 40 ಹೆಕ್ಟೇರ್‌ಗಿಂತ ಮೇಲ್ಪಟ್ಟು ನೀರನ್ನು ಒದಗಿಸುವ ಸಾಮರ್ಥ್ಯ ಹೊಂದಿರುವುದರಿಂದ ಸಣ್ಣ ನೀರಾವರಿ ಇಲಾಖೆಗೆ ವರ್ಗಾಯಿಸಲು ಸರ್ವೇ ಕಾರ್ಯಗಳು ಮುಗಿದಿರುತ್ತದೆ. ಕಂದಾಯ ಇಲಾಖೆಯಲ್ಲಿ ಕೆರೆ ಅಭಿವೃದ್ಧಿಪಡಿಸುವ ಯಾವುದೇ ಯೋಜನೆಗಳು ಲಭ್ಯವಿರುವುದಿಲ್ಲ. ಆದುದರಿಂದ ಸದರಿ ಕೆರೆಯನ್ನು ಸಣ್ಣ ನೀರಾವರಿ ಇಲಾಖೆಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುವುದು.